## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ** ಮಕ್ಕಳನ್ನು ಪ್ರಾಥಮಿಕ ಶಾಲಾ ಒಂದನೇ ತರಗತಿಗೆ ದಾಖಲಾತಿ ಮಾಡಲು ವಯೋಮಿತಿಯನ್ನು ನಿರ್ಧರಿಸುವ ಬಗ್ಗೆ .

**ಓದಲಾಗಿದೆ :**

1. ಸರ್ಕಾರದ ಆದೇಶ ಸಂಖ್ಯೆ ಇಡಿ 51 ಪಿಜಿಸಿ 2016 (ಭಾಗ), ದಿನಾಂಕ : 08-02-2016.
2. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಜ್ಞಾಪನ ಸಂಖ್ಯೆ: ಎಡಿಎಂ 2(2) ಪ್ರಾ.ಶಾ.ದಾ-01/2016-17, ದಿನಾಂಕ : 18-01-2017
3. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಜ್ಞಾಪನ ಸಂಖ್ಯೆ: ಎಡಿಎಂ 2(2) ಪ್ರಾ.ಶಾ.ದಾ-01/2016-17, ದಿನಾಂಕ : 07-06-2017 .
4. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಏಕ ಕಡತ ಸಂಖ್ಯೆ: ಎಡಿಎಂ2(2)/ಪ್ರಾ.ಶಾ.ದಾ/01/2022-23, ದಿನಾಂಕ:24.06.2022.

**ಪ್ರಸ್ತಾವನೆ :**

2016-17ನೇ ಶೈಕ್ಷಣಿಕ ಸಾಲಿನಿಂದ ಆರ್.ಟಿ.ಇ ಕಾಯ್ದೆ -2009 ರ ಸೆಕ್ಷನ್ 12 (1) (ಸಿ) ಅಡಿಯಲ್ಲಿ ಅನುದಾನರಹಿತ ಹಾಗೂ ಅಲ್ಪಸಂಖ್ಯಾತ ಸಂಸ್ಥೆಗಳ ವಿದ್ಯಾರ್ಥಿಗಳ ದಾಖಲಾತಿ ಪ್ರವೇಶಾವಕಾಶಕ್ಕೆ ಸಂಬಂಧಿಸಿದಂತೆ ಎಲ್.ಕೆ.ಜಿ ತರಗತಿಗೆ 3 ವರ್ಷ 10 ತಿಂಗಳಿನಿಂದ 4 ವರ್ಷ 10 ತಿಂಗಳು ಹಾಗೂ 1 ನೇ ತರಗತಿಗೆ 5 ವರ್ಷ 10 ತಿಂಗಳಿನಿಂದ 6 ವರ್ಷ 10 ತಿಂಗಳು ವಯೋಮಿತಿಯನ್ನು ನಿಗಧಿಪಡಿಸಿ ಮೇಲೆ ಓದಲಾದ (1)ರ ಸರ್ಕಾರದ ಆದೇಶದಲ್ಲಿ ಆದೇಶಿಸಲಾಗಿದೆ .

ಆಯುಕ್ತರು , ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರು ಪೂರ್ವ ಪ್ರಾಥಮಿಕ ( ಎಲ್.ಕೆ.ಜಿ ) ಹಾಗೂ ಪ್ರಾಥಮಿಕ ಶಾಲೆಯ 1ನೇ ತರಗತಿ ಮಕ್ಕಳನ್ನು ದಾಖಲಾತಿ ಮಾಡಲು ಕರ್ನಾಟಕ ಶಿಕ್ಷಣ ಕಾಯ್ದೆ - 1983ರ ನಿಯಮ -20 ರನ್ವಯ ಆಯಾ ಶೈಕ್ಷಣಿಕ ವರ್ಷದ ಜೂನ್ -1 ಕ್ಕೆ ಪೂರ್ವ ಪ್ರಾಥಮಿಕ (ಎಲ್.ಕೆ.ಜಿ ), 3 ವರ್ಷ 10 ತಿಂಗಳು, 1 ನೇ ತರಗತಿಗೆ 5 ವರ್ಷ 10 ತಿಂಗಳು ಎಂಬುದಾಗಿ ಮೇಲೆ ಓದಲಾದ (2) ರ ಜ್ಞಾಪನ ದಿನಾಂಕ : 13-01-2017ರಲ್ಲಿ ವಯೋಮಿತಿಯನ್ನು ನಿಗದಿಪಡಿಸಿರುತ್ತಾರೆ .

ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ ಇವರು ದಿನಾಂಕ:18.01.2017ರ ಜ್ಞಾಪನವನ್ನು ಮಾರ್ಪಡಿಸಿ ಶೈಕ್ಷಣಿಕ ವರ್ಷ 2018-19ನೇ ಸಾಲಿನಿಂದ ಸರ್ಕಾರಿ, ಅನುದಾನಿತ, ಅನುದಾನ ರಹಿತ ಶಾಲೆಗಳಲ್ಲಿ 1ನೇ ತರಗತಿಗೆ ನೇರವಾಗಿ ದಾಖಲಾಗುವ ಮಗುವು ಸಂಬಂಧಿಸಿದ ಶೈಕ್ಷಣಿಕ ವರ್ಷದ ಜೂನ್ 1 ರಂದು 5 ವರ್ಷ, 10 ತಿಂಗಳು ಪೂರ್ಣಗೊಂಡಿರಬೇಕೆಂದು ಮೇಲೆ ಓದಲಾದ (3)ರ ಜ್ಞಾಪನದಲ್ಲಿ, ನಿಗಧಿಪಡಿಸಲಾಗಿದೆ.

2009ರಲ್ಲಿ ಆರ್.ಟಿ.ಇ. ಕಾಯ್ದೆ ಮತ್ತು 2012 ರಲ್ಲಿ ಕಡ್ಡಾಯ ಶಿಕ್ಷಣ ನಿಯಮಗಳು ಜಾರಿಗೆ ಬಂದಿದ್ದು. ಇವುಗಳು ಕರ್ನಾಟಕ ಶಿಕ್ಷಣ ಕಾಯ್ದೆ 1983 ಮತ್ತು ಅದರಡಿ ರಚಿತವಾದ ಎಲ್ಲಾ ನಿಯಮಗಳನ್ನು / ಆದೇಶಗಳನ್ನು ನಿರಸನಗೊಳಿಸುತ್ತದೆ (Overruled). ಆದ್ದರಿಂದ, ಆರ್.ಟಿ.ಇ. ಕಾಯ್ದೆ 2009 ಮತ್ತು ಕಡ್ಡಾಯ ಶಿಕ್ಷಣ ನಿಯಮಗಳು 2012ರಂತೆ ಪ್ರಾಥಮಿಕ ಶಾಲೆಗೆ ದಾಖಲಿಸಲು ಮಗುವಿನ ಕನಿಷ್ಠ ವಯಸ್ಸನ್ನು ನಿಗಧಿಪಡಿಸುವುದು ಅಗತ್ಯವಾಗಿರುತ್ತದೆ. ಪ್ರಯುಕ್ತ, ಸರ್ಕಾರದ ಆದೇಶ ಸಂಖ್ಯೆ: ಇಡಿ 708 ಪಿಜಿಸಿ 2017



Scanned with CamScanner

ದಿನಾಂಕ: 23-05-2018ರ ಆದೇಶದಲ್ಲಿ ಸರ್ಕಾರಿ ಅನುದಾನಿತ ಹಾಗೂ ಅನುದಾನರಹಿತ ಶಾಲೆಗಳಲ್ಲಿ ಒಂದನೇ ತರಗತಿಗೆ ದಾಖಲಾಗಲು ಮಗುವಿಗೆ ಕನಿಷ್ಠ ವಯೋಮಿತಿಯನ್ನು 05 ವರ್ಷ 05 ತಿಂಗಳು ಹಾಗೂ ಗರಿಷ್ಠ 07 ವರ್ಷಗಳಿಗೆ ನಿಗಧಿಪಡಿಸಲಾಗಿದೆ. ತತ್ಸಂಬಂಧಿ ರಾಜ್ಯಪತ್ರವನ್ನು ಹಾಗೂ ಸರ್ಕಾರದ ಪತ್ರ ಸಂಖ್ಯೆ: ಇಡಿ 60 ಪಿಜಿಸಿ 2020 ದಿನಾಂಕ: 20-03-2020ರಲ್ಲಿ ಶೈಕ್ಷಣಿಕ ವರ್ಷದ ಜೂನ್ 01ನೇ ತಾರೀಖಿಗೆ ಅನ್ವಯವಾಗುವಂತೆ ಎಲ್.ಕೆ.ಜಿ. ದಾಖಲಾತಿ ಹೊಂದಲು 03 ವರ್ಷ 05 ತಿಂಗಳು ಹಾಗೂ ಒಂದನೇ ತರಗತಿಗೆ 05 ವರ್ಷ 05 ತಿಂಗಳು ವಯೋಮಿತಿ ನಿಗಧಿಪಡಿಸಲಾಗಿರುತ್ತದೆ.

ಸರ್ಕಾರದ ಆದೇಶ ಸಂಖ್ಯೆ: ಇಡಿ 708 ಪಿಜಿಸಿ 2017 ದಿನಾಂಕ: 23-05-2018 ಹಾಗೂ ಸರ್ಕಾರದ ಪತ್ರ ಸಂಖ್ಯೆ: ಇಡಿ 60 ಪಿಜಿಸಿ 2020 ದಿನಾಂಕ: 20-03-2020 ನ್ನು ಹಿಂಪಡೆದು ಆರ್.ಟಿ.ಇ. ಕಾಯ್ದೆ 2009 ಮತ್ತು ಕಡ್ಡಾಯ ಶಿಕ್ಷಣ ನಿಯಮಗಳು 2012 ಗಳಂತೆ ಶೈಕ್ಷಣಿಕ ವರ್ಷದ ಜೂನ್ ಒಂದನೇ ತಾರೀಖಿಗೆ ಕಡ್ಡಾಯವಾಗಿ 06 ವರ್ಷಗಳು ಪೂರ್ಣಗೊಂಡಿರುವ ಮಗುವನ್ನು ಒಂದನೇ ತರಗತಿಗೆ ದಾಖಲಾಗಲು ಆದೇಶ ಹೊರಡಿಸುವಂತೆ ಕೋರಿ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಮೇಲೆ ಓದಲಾದ ಕ್ರಮಾಂಕ(4)ರ ಏಕಕಡತದಲ್ಲಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ : ಇಪಿ 260 ಪಿಜಿಸಿ 2021;</u>**
**<u>ಬೆಂಗಳೂರು ದಿನಾಂಕ :26-07-2022.</u>**

ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರದ ಆದೇಶ ಸಂಖ್ಯೆ: ಇಡಿ 708 ಪಿಜಿಸಿ 2017 ದಿನಾಂಕ: 23-05-2018 ಹಾಗೂ ಸರ್ಕಾರದ ಪತ್ರ ಸಂಖ್ಯೆ: ಇಡಿ 60 ಪಿಜಿಸಿ 2020 ದಿನಾಂಕ: 20-03-2020 ನ್ನು ಹಿಂಪಡೆದು, ಆರ್.ಟಿ.ಇ. ಕಾಯ್ದೆ 2009 ಮತ್ತು ಕಡ್ಡಾಯ ಶಿಕ್ಷಣ ನಿಯಮಗಳು 2012 ರಂತೆ ಶೈಕ್ಷಣಿಕ ವರ್ಷದ ಜೂನ್ ಒಂದನೇ ತಾರೀಖಿಗೆ ಕಡ್ಡಾಯವಾಗಿ 06 ವರ್ಷಗಳು ಪೂರ್ಣಗೊಂಡಿರುವ ಮಗುವನ್ನು ಒಂದನೇ ತರಗತಿಗೆ ದಾಖಲಿಸಲು ವಯೋಮಿತಿಯನ್ನು ನಿಗಧಿಪಡಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

ಹೆಚ್. ಎಸ್. [signature] 26/7/2022

**(ಹೆಚ್. ಎಸ್. ಶಿವಕುಮಾರ್)**
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರಾಥಮಿಕ),
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ.

ಸಂಕಲನಕಾರರು, ಕರ್ನಾಟಕ ರಾಜ್ಯ ವಿಶೇಷ ಪತ್ರ, ಬೆಂಗಳೂರು- ಈ ಆದೇಶವನ್ನು ಕರ್ನಾಟಕ ರಾಜ್ಯ ವಿಶೇಷ ಪತ್ರದಲ್ಲಿ ಪ್ರಕಟಿಸಿ, ಪ್ರಕಟಿತ 500 ಪ್ರತಿಗಳನ್ನು ಸರ್ಕಾರಕ್ಕೆ ಸಲ್ಲಿಸುವಂತೆ ಕೋರಲಾಗಿದೆ.

**ಇವರಿಗೆ:-**

1. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು-560001.
2. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರಗಿ/ಧಾರವಾಡ.
3. ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು/ಕಲಬುರಗಿ/ಧಾರವಾಡ.
4. ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ. (ಆಯುಕ್ತರ ಮುಖಾಂತರ)
5. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

Scanned with CamScanner